# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 89

ವಿಧಾನ ಪರಿಷತ್ತಿನ ಸದಸ್ಯರ ಹೆಸರು : ಶ್ರೀ ಕೇಶವ ಪ್ರಸಾದ್ ಎಸ್
(ವಿಧಾನಸಭೆಯಿಂದ ಚುನಾಯಿತರಾದವರು)

ಉತ್ತರಿಸಬೇಕಾದ ದಿನಾಂಕ : 04.12.2023

ಉತ್ತರಿಸುವ ಸಚಿವರು : ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ ಇಲಾಖೆ ಸಚಿವರು

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ | ರಾಜ್ಯದಲ್ಲಿರುವ ಬಿ.ಪಿ.ಎಲ್ ಮತ್ತು ಅಂತ್ಯೋದಯ ಪಡಿತರ ಚೀಟಿದಾರರ ಸಂಖ್ಯೆ ಎಷ್ಟು; | ರಾಜ್ಯದಲ್ಲಿ ಒಟ್ಟು 10,86,968 ಅಂತ್ಯೋದಯ ಅನ್ನ ಯೋಜನಾ (AAY) ಹಾಗೂ 1,16,80,341 ಆದ್ಯತಾ ಪಡಿತರ ಚೀಟಿಗಳು (PHH) ಚಾಲ್ತಿಯಲ್ಲಿರುತ್ತವೆ. |
| ಆ | ಪಡಿತರ ಚೀಟಿದಾರರಿಗೆ 10 ಕೆ.ಜಿ. ಅಕ್ಕಿಯನ್ನು ನೀಡುವುದಾಗಿ ಭರವಸೆ ನೀಡಲಾಗಿದ್ದು, ಭರವಸೆಯ ಅನುಸಾರ ಯಾವ ತಿಂಗಳಿನಿಂದ 10 ಕೆ.ಜಿ ಅಕ್ಕಿಯನ್ನು ನೀಡಲಾಗುವುದು; | ಪ್ರಸ್ತುತ, ರಾಷ್ಟ್ರೀಯ ಆಹಾರ ಭದ್ರತಾ ಕಾಯ್ದೆಯನ್ವಯ ಪ್ರತಿ ತಿಂಗಳು ಅಂತ್ಯೋದಯ ಪಡಿತರ ಚೀಟಿಯನ್ನು ಹೊಂದಿರುವ ಕುಟುಂಬಕ್ಕೆ 35 ಕೆ.ಜಿ ಆಹಾರಧಾನ್ಯ, ಆದ್ಯತಾ ಪಡಿತರ ಚೀಟಿಯನ್ನು ಹೊಂದಿರುವ ಕುಟುಂಬದ ಪ್ರತಿ ಸದಸ್ಯರಿಗೆ ತಲಾ 5 ಕೆ.ಜಿ ಆಹಾರಧಾನ್ಯಗಳನ್ನು ವಿತರಿಸಲಾಗುತ್ತದೆ. ಇದರೊಂದಿಗೆ 2023ರ ಜುಲೈನಿಂದ ಜಾರಿಗೆ ಬರುವಂತೆ ರಾಜ್ಯದಲ್ಲಿರುವ ಆದ್ಯತಾ ಮತ್ತು ಅಂತ್ಯೋದಯ ಅನ್ನ ಯೋಜನೆ ಪಡಿತರ ಚೀಟಿಯ ಪ್ರತಿ ಫಲಾನುಭವಿಗೆ ರಾಜ್ಯ ಸರ್ಕಾರದ ವೆಚ್ಚದಲ್ಲಿ 5 ಕೆ.ಜಿ ಆಹಾರ ಧಾನ್ಯವನ್ನು ವಿತರಿಸಲು ಆದೇಶಿಸಲಾಗಿದ್ದು, ಇದರ ಬದಲಾಗಿ ಪ್ರತಿ ಕೆ.ಜಿ ಆಹಾರಧಾನ್ಯಕ್ಕೆ ರೂ.34/- ರಂತೆ ಪ್ರತಿ ಫಲಾನುಭವಿಗೆ 5 ಕೆ.ಜಿ ಆಹಾರಧಾನ್ಯದ ಮೌಲ್ಯವನ್ನು ಪಡಿತರ ಚೀಟಿಯ ಕುಟುಂಬದ ಮುಖ್ಯಸ್ಥರ ಬ್ಯಾಂಕ್ ಖಾತೆಗೆ DBT ಮೂಲಕ ಹಣ ಪಾವತಿಸಲಾಗುತ್ತದೆ. |
| ಇ | 10 ಕೆ.ಜಿ ಅಕ್ಕಿಯ ಬದಲಾಗಿ ಪ್ರತಿ ವ್ಯಕ್ತಿಗೆ ಕೊಡಲಾಗುತ್ತಿರುವ ಹಣ ಎಷ್ಟು; | |
| ಈ | ಪ್ರಸ್ತುತ ರಾಜ್ಯದಲ್ಲಿ ಪಡಿತರ ಚೀಟಿದಾರರಿಗೆ ಹಂಚಲು ಒಟ್ಟು ಎಷ್ಟು ಪ್ರಮಾಣದ ಅಕ್ಕಿಯ ಕೊರತೆ ಇದೆ; ಎಂದಿನಿಂದ 10 ಕೆ.ಜಿ ಅಕ್ಕಿಯನ್ನು ಪೂರೈಸಲಾಗುವುದು? (ಸಂಪೂರ್ಣ ಮಾಹಿತಿ ನೀಡುವುದು) | ರಾಜ್ಯ ಸರ್ಕಾರದ ವತಿಯಿಂದ ಹೆಚ್ಚುವರಿಯಾಗಿ 5 ಕೆ.ಜಿ ಆಹಾರಧಾನ್ಯವನ್ನು ಸೇರಿಸಿ, ಪ್ರತಿ ತಿಂಗಳು ಪ್ರತಿ ಫಲಾನುಭವಿಗೆ ತಲಾ 10 ಕೆ.ಜಿ. ಆಹಾರ ಧಾನ್ಯವನ್ನು ಉಚಿತವಾಗಿ ವಿತರಿಸಲು ನಿರ್ಧರಿಸಲಾಗಿದೆ. |

| | | |
|---|---|---|
| | | ಇದಕ್ಕೆ ಪ್ರತಿ ಮಾಹೆಗೆ ಹೆಚ್ಚುವರಿ 2.29 ಲಕ್ಷ ಮೆ.ಟನ್ ಅಕ್ಕಿಯ ಅವಶ್ಯಕತೆ ಇರುತ್ತದೆ. ಬೇರೆ ಬೇರೆ ರಾಜ್ಯಗಳಿಂದ ಅಕ್ಕಿ ಖರೀದಿಸಲು ಕ್ರಮವಹಿಸಲಾಗುತ್ತಿದ್ದು, ಅಕ್ಕಿ ಲಭ್ಯವಾದ ನಂತರ ವಿತರಿಸಲು ಕ್ರಮವಹಿಸಲಾಗುತ್ತದೆ. ಪ್ರಸ್ತುತ ಸಂದರ್ಭದಲ್ಲಿ ಪಡಿತರ ಫಲಾನುಭವಿಗಳಿಗೆ ವಿತರಿಸಲು ಅಗತ್ಯವಿರುವ ಅಕ್ಕಿಯ ಅಲಭ್ಯತೆಯ ಹಿನ್ನಲೆಯಲ್ಲಿ ಆದ್ಯತಾ ಮತ್ತು ಅಂತ್ಯೋದಯ ಪಡಿತರ ಚೀಟಿಯ ಪ್ರತಿ ಫಲಾನುಭವಿಗೆ ಪ್ರತಿ ಕೆ.ಜಿ ಗೆ ರೂ.34 ರಂತೆ 5 ಕೆ.ಜಿ ಆಹಾರಧಾನ್ಯದ ಮೌಲ್ಯ ರೂ.170.00ಗಳನ್ನು ಪಡಿತರ ಚೀಟಿಯ ಕುಟುಂಬದ ಮುಖ್ಯಸ್ಥರ ಬ್ಯಾಂಕ್ ಖಾತೆಗೆ ನಗದು ವರ್ಗಾವಣೆ ಮುಖಾಂತರ(DBT) ಜಮಾ ಮಾಡಲಾಗುತ್ತಿದೆ. |

ಆನಾಸ 252 ಡಿಆರ್‌ಎ 2023 (ಇ-ಆಫೀಸ್)

(ಕೆ.ಹೆಚ್. ಮುನಿಯಪ್ಪ)

ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ

ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ

ಇಲಾಖಾ ಸಚಿವರು